# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಆಯುಕ್ತರು ರವರ ಕಛೇರಿ, ನರಸಿಂಹರಾಜ ವೃತ್ತ, ಬೆಂಗಳೂರು – 560 002.

ಸಂಖ್ಯೆ: ಹೆನಿನಯೋ/ಪಿಆರ್/1533/2016–17 ದಿನಾಂಕ: 30–03–2017.

## ಸುತ್ತೋಲೆ

ವಿಷಯ:– ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 18(1ಎ) ರಡಿ ಕೆರೆ ಪುನರುಜ್ಜೀವನ ಶುಲ್ಕವನ್ನು ಪಾವತಿಸಿಕೊಳ್ಳುವ ಬಗ್ಗೆ.

ಉಲ್ಲೇಖ:– ಸರ್ಕಾರದ ಆದೇಶ ಸಂಖ್ಯೆ: ನಅಇ 36 ಎಂಎನ್‌ಯು 2016 (ಭಾಗ), ಬೆಂಗಳೂರು, ದಿನಾಂಕ: 27–01–2017.

*********

ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ ಕಲಂ 15 ರಡಿ ಕಟ್ಟಡ ನಿರ್ಮಾಣಕ್ಕೆ ನೀಡಲಾಗುವ ಅನುಮತಿ ಅಥವಾ ಕಲಂ 17 ರಡಿಯಲ್ಲಿ ನೀಡಲಾಗುವ ಮಂಜೂರಾತಿಗಳಿಗೆ ಕಾಯ್ದೆಯ ಕಲಂ 18(1A) ರನ್ವಯ ಕೆರೆಗಳ ಪುನರುಜ್ಜೀವನ ಶುಲ್ಕವನ್ನು ಭರಿಸಿಕೊಳ್ಳಲು ನಿರ್ದೇಶನ ನೀಡಲಾಗಿರುತ್ತದೆ.

ಆದುದರಿಂದ, ಉಲ್ಲೇಖಿತ ಸರ್ಕಾರದ ಸುತ್ತೋಲೆಯಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಕಟ್ಟಡ ನಿರ್ಮಾಣಕ್ಕೆ ನಕ್ಷೆ ಮಂಜೂರಾತಿ / ಪರವಾನಗಿ ನೀಡುವಾಗ 'ಕೆರೆ ಪುನರುಜ್ಜೀವನ' ಶುಲ್ಕಗಳನ್ನು ಭರಿಸಿಕೊಳ್ಳಲು ಈ ಮೂಲಕ ಸೂಚಿಸಲಾಗಿದೆ.

ಸಹಿ/-
ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಲಗತ್ತು:– ಉಲ್ಲೇಖಿತ ಸರ್ಕಾರದ ಸುತ್ತೋಲೆ.

ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

1) ವಿಶೇಷ ಆಯುಕ್ತರು (ಯೋಜನೆಗಳು) ರವರಿಗೆ 1/4/17
2) ವಿಶೇಷ ಆಯುಕ್ತರು (ಹಣಕಾಸು) ರವರಿಗೆ
3) ಅಪರ / ಜಂಟಿ ಆಯುಕ್ತರು (ಪೂರ್ವ ವಲಯ / ಪಶ್ಚಿಮ ವಲಯ / ದಕ್ಷಿಣ ವಲಯ / ಮಹದೇವಪುರ ವಲಯ / ಯಲಹಂಕ ವಲಯ / ದಾಸರಹಳ್ಳಿ ವಲಯ / ಬೊಮ್ಮನಹಳ್ಳಿ ವಲಯ / ರಾಜರಾಜೇಶ್ವರಿ ನಗರ ವಲಯ / ಕಂದಾಯ) ರವರುಗಳಿಗೆ
4) ಪ್ರಧಾನ ಅಭಿಯಂತರರು ರವರಿಗೆ
5) ಅಪರ ನಿರ್ದೇಶಕರು (ನಗರ ಯೋಜನೆ) ರವರಿಗೆ
6) ಮುಖ್ಯ ಅಭಿಯಂತರರು (ಕೆರೆಗಳು) ರವರಿಗೆ 1/4/17
7) ಮುಖ್ಯ ಲೆಕ್ಕಾಧಿಕಾರಿಗಳು ರವರಿಗೆ ಮೇಲ್ಕಂಡ ಶುಲ್ಕಗಳನ್ನು ಪ್ರತ್ಯೇಕ ಲೆಕ್ಕ ಶೀರ್ಷಿಕೆಯಡಿಯಲ್ಲಿ ಪಾವತಿಸಿಕೊಳ್ಳಲು 'R' Code ಸೃಜಿಸಲು ಕ್ರಮಕ್ಕಾಗಿ
8) ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ, ದಕ್ಷಿಣ ಮತ್ತು ಸ್ಕ್ವಾಡ್) ರವರಿಗೆ
9) ಮುಖ್ಯ ಅಭಿಯಂತರರು (ಪೂರ್ವ ವಲಯ / ಪಶ್ಚಿಮ ವಲಯ / ದಕ್ಷಿಣ ವಲಯ / ಮಹದೇವಪುರ ವಲಯ / ಯಲಹಂಕ ವಲಯ / ದಾಸರಹಳ್ಳಿ ವಲಯ / ಬೊಮ್ಮನಹಳ್ಳಿ ವಲಯ / ರಾಜರಾಜೇಶ್ವರಿ ನಗರ ವಲಯ ರವರುಗಳಿಗೆ
10) ಸಹಾಯಕ ನಿರ್ದೇಶಕರು (ನಗರ ಯೋಜನೆ – ಪೂರ್ವ ವಲಯ / ಪಶ್ಚಿಮ ವಲಯ / ದಕ್ಷಿಣ ವಲಯ / ಮಹದೇವಪುರ ವಲಯ / ಯಲಹಂಕ ವಲಯ / ದಾಸರಹಳ್ಳಿ ವಲಯ / ಬೊಮ್ಮನಹಳ್ಳಿ ವಲಯ / ರಾಜರಾಜೇಶ್ವರಿ ನಗರ ವಲಯ) ರವರುಗಳಿಗೆ
11) ಎಲ್ಲಾ ಉಪ ವಿಭಾಗಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು ರವರುಗಳಿಗೆ
12) ಸಲಹೆಗಾರರು, ಮಾಹಿತಿ ತಂತ್ರಜ್ಞಾನ ರವರಿಗೆ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು ಕಳುಹಿಸಿದೆ.

ಆಯುಕ್ತರವರ ಕಛೇರಿ
- 1 APR
ಜಾವಕ

ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 36 ಬೆಮಪ್ರಾ 2016 (ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ: 27.01.2017

## ಸುತ್ತೋಲೆ

ವಿಷಯ: ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 18(1ಎ) ರಡಿ ಕೆರೆ ಪುನರುಜ್ಜೀವನ ಶುಲ್ಕವನ್ನು ಪಾವತಿಸಿಕೊಳ್ಳುವ ಬಗ್ಗೆ.

*******

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 18(1ಎ) ರನ್ವಯ ಈ ಹಿಂದೆ ಪ್ರತಿ ಎಕರೆಗೆ ರೂ. 1.00 ಲಕ್ಷದಂತೆ ಕೆರೆ ಪುನರುಜ್ಜೀವನ ಶುಲ್ಕ ವಿಧಿಸುವುದನ್ನು ಪರಿಷ್ಕರಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 24 ಶಾಸನ 2015, ದಿನಾಂಕ: 10.09.2015 ರನ್ವಯ ಕಲಂ 18(1ಎ)ಗೆ ತಿದ್ದುಪಡಿ ಮಾಡಿ ಕೆರೆ ಪುನರುಜ್ಜೀವನ ಶುಲ್ಕವನ್ನು ವಿಧಿಸಲು ಅವಕಾಶ ಕಲ್ಪಿಸಲಾಗಿದೆ.

ಇದರನ್ವಯ ಹಾಗೂ ಕೆರೆ ಪುನರುಜ್ಜೀವನ ಶುಲ್ಕವನ್ನು ವಿಧಿಸುವ ಸಂಬಂಧ ನಿಯಮಗಳನ್ನು ರಚಿಸುವ ಪ್ರಕ್ರಿಯೆ ಸರ್ಕಾರದ ಹಂತದಲ್ಲಿ ಜಾರಿಯಲ್ಲಿರುವುದರಿಂದ, ಸದರಿ ನಿಯಮಗಳನ್ನು ಅಂತಿಮ ಗೊಳಿಸಲು ಕಾಲಾವಕಾಶದ ಅಗತ್ಯವಿರುತ್ತದೆ. ಆದ್ದರಿಂದ ಸದರಿ ನಿಯಮಗಳನ್ನು ಅಂತಿಮಗೊಳಿಸುವವರೆಗೆ ಕಲಂ 15 ಮತ್ತು ಕಲಂ 17 ರನ್ವಯ ನೀಡಲಾಗುವ ಅನುಮೋದನೆಗಳಿಗೆ ಕೆರೆ ಪುನರುಜ್ಜೀವನ ಶುಲ್ಕವನ್ನು ಭರಿಸಿಕೊಳ್ಳುವ ದೃಷ್ಟಿಯಿಂದ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು (ಬಿ.ಡಿ.ಎ ಹೊರತುಪಡಿಸಿ) / ಯೋಜನಾ ಪ್ರಾಧಿಕಾರಗಳು (ಬಿ.ಎಂ.ಆರ್.ಡಿ.ಎ ವ್ಯಾಪ್ತಿಯಲ್ಲಿನ ಯೋಜನಾ ಪ್ರಾಧಿಕಾರಗಳನ್ನು ಹೊರತುಪಡಿಸಿ) / ಪುರಸಭೆ ಯೋಜನಾ ಪ್ರಾಧಿಕಾರಗಳು / ನಗರ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 36 ಬೆಮಪ್ರಾ 2016 (ಭಾ), ದಿನಾಂಕ: 08.12.2016 ರನ್ವಯ ನಿರ್ದೇಶನ ನೀಡಲಾಗಿದೆ.

ಅದೇ ರೀತಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿ.ಡಿ.ಎ) ಮತ್ತು ಬಿ.ಎಂ.ಆರ್.ಡಿ.ಎ ವ್ಯಾಪ್ತಿಯಲ್ಲಿನ ಯೋಜನಾ ಪ್ರಾಧಿಕಾರಗಳಿಗೆ ತಾತ್ಕಾಲಿಕವಾಗಿ ಈ ಕೆಳಕಂಡಂತೆ ಶುಲ್ಕವನ್ನು ಭರಿಸಿಕೊಳ್ಳಲು ಈ ಮೂಲಕ ನಿರ್ದೇಶನ ನೀಡಲಾಗಿದೆ.

| Sl.No | Local Planning Area and Population | Fee per sq. m of land / Plot |
|---|---|---|
| 1. | Local Planning Areas within the Bengaluru Metropolitan Region irrespective of Population. | Rs.25/- |
| 2. | Local Planning Area with a Population of ten lakhs and above. | Rs.20/- |

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

**ಇವರಿಗೆ:**

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
2. ಆಯುಕ್ತರು, ಬೆಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
3. ಮಹಾನಗರ ಆಯುಕ್ತರು, ಬಿ.ಎಂ.ಆರ್.ಡಿ.ಎ. ಅಲಿ ಅಸ್ಕರ್ ರಸ್ತೆ, ಬೆಂಗಳೂರು.

..2/-

4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ಸದಸ್ಯ ಕಾರ್ಯದರ್ಶಿಗಳು, ಬಿ.ಎಂ.ಆರ್.ಡಿ.ಎ. ವ್ಯಾಪ್ತಿಯ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳಿಗೆ ಮಹಾನಗರ ಆಯುಕ್ತರು. ಬಿ.ಎಂ.ಆರ್.ಡಿ.ಎ. ಬೆಂಗಳೂರು ಇವರ ಮುಖಾಂತರ.
6. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.
2. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ.
3. ಸರ್ಕಾರದ ಉಪ ಕಾರ್ಯದರ್ಶಿ-1 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
4. ಸರ್ಕಾರದ ಉಪ ಕಾರ್ಯದರ್ಶಿ-2 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
5. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
6. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಬಿ.ಡಿ.ಎ ರವರ ಆಪ್ತ ಸಹಾಯಕರು. ನಗರಾಭಿವೃದ್ಧಿ ಇಲಾಖೆ.
7. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಬಿ.ಬಿ.ಎಂ.ಪಿ ರವರ ಆಪ್ತ ಸಹಾಯಕರು. ನಗರಾಭಿವೃದ್ಧಿ ಇಲಾಖೆ.